All India Radio: Bangalore

**Regional Bulletin In Kannada**

**11.08.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**11.08.2025 / 6.40 p.m.**

**<><><><>**

**ಮುಖ್ಯಾಂಶಗಳು**

೧. ಸರ್ಕಾರದ ವಿರುದ್ಧ ಆರೋಪ ಹಿನ್ನೆಲೆ; ಸಚಿವ ಕೆ.ಎನ್. ರಾಜಣ್ಣ ಸಂಪುಟದಿಂದ ವಜಾ

೨. ವಿಧಾನಸಭೆಯಲ್ಲಿ ೧೮ ಶಾಸಕರ ಅಮಾನತು ಪ್ರಕರಣ ಹಿಂಪಡೆದ ಸಭಾಧ್ಯಕ್ಷ ಯು.ಟಿ. ಖಾದರ್

೩. ಒಳ ಮೀಸಲಾತಿ ಇತ್ಯರ್ಥವಾಗದೇ ಖಾಲಿ ಹುದ್ದೆಗಳ ಭರ್ತಿ ಇಲ್ಲ - ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ್ ಪಾಟೀಲ್

೪. ಬೆಂಗಳೂರು ಸೇರಿದಂತೆ ರಾಜ್ಯದ ಹಲವೆಡೆ ಇಂದಿನಿಂದ ವ್ಯಾಪಕ ಮಳೆ - ಹವಾಮಾನ ಇಲಾಖೆ ಮುನ್ಸೂಚನೆ

><><><><><><><

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಮತ ವಂಚನೆ ನಡೆದಿದೆ ಎಂಬ ಸಚಿವ ಕೆ.ಎನ್. ರಾಜಣ್ಣ ನೀಡಿದ ಹೇಳಿಕೆ ಹಿನ್ನೆಲೆಯಲ್ಲಿ ಸಂಪುಟದಿಂದ ಅವರನ್ನು ವಜಾಗೊಳಿಸಲಾಗಿದೆ. ಇಂದೇ ಸಚಿವ ರಾಜಣ್ಣ ಅವರ ರಾಜೀನಾಮೆಯನ್ನು ಪಡೆಯುವಂತೆ ಹೈಕಮಾಂಡ್ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸೂಚಿಸಿತ್ತು. ಈ ನಡುವೆ, ಸಚಿವ ರಾಜಣ್ಣ ವಿಧಾನಸೌಧದಲ್ಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಚರ್ಚಿಸಿದರು. ಬಳಿಕ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಸಚಿವ ರಾಜಣ್ಣ ಅವರನ್ನು ಸಂಪುಟದಿಂದ ವಜಾಗೊಳಿಸಲಾಗಿದ್ದು, ಅನುಮೋದಿಸುವಂತೆ ಸರ್ಕಾರದ ಪತ್ರವನ್ನು ರಾಜ್ಯಪಾಲರಿಗೆ ಕಳುಹಿಸಿದ್ದಾರೆ.

><><><><><><><

ವಿಧಾನಮಂಡಲದ ಮಳೆಗಾಲದ ಅಧಿವೇಶನದ ಮೊದಲ ದಿನವಾದ ಇಂದು ಬೆಳಗ್ಗೆ ವಿಧಾನಸಭೆಯ ಕಲಾಪ ಆರಂಭವಾಗುತ್ತಿದ್ದಂತೆ ಸಭಾಧ್ಯಕ್ಷ ಯು.ಟಿ.ಖಾದರ್ ಇತ್ತೀಚೆಗೆ ಅಗಲಿದ ಗಣ್ಯರಿಗೆ ಸಂತಾಪ ಸೂಚನೆ ನಿರ್ಣಯವನ್ನು ಮಂಡಿಸಿದರು. ಸಂತಾಪ ಸೂಚನಾ ನಿರ್ಣಯವನ್ನು ಬೆಂಬಲಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಅಗಲಿದವರ ಗುಣಗಾನ ಮಾಡಿದರು. ದುರಂತ ಘಟನೆಗಳ ಬಗ್ಗೆ ವಿಷಾಧ ವ್ಯಕ್ತಪಡಿಸಿದರು. ಬಳಿಕ ವಿರೋಧ ಪಕ್ಷಗಳ ೧೮ ಶಾಸಕರ ಅಮಾನತು ಹಿಂಪಡೆಯುವ ನಿರ್ಣಯವನ್ನು ಘಟನೋತ್ತರವಾಗಿ ಸದನ ಸ್ಥಿರೀಕರಿಸಿತ್ತು. ಸಭಾಧ್ಯಕ್ಷರ ಪೀಠ ಬಗ್ಗೆ ಅಶಿಸ್ತು ತೋರಿದ್ದ ಆರೋಪದ ಮೇಲೆ ಹಿಂದಿನ ಅಧಿವೇಶನದಲ್ಲಿ ೬ ತಿಂಗಳ ಕಾಲ ಬಿಜೆಪಿಯ ೧೮ ಶಾಸಕರ ಅಮಾನತ್ತುಗೊಳಿಸಲಾಗಿತ್ತು. ಮುಖ್ಯಮಂತ್ರಿಯವರ ಸಲಹೆ ಮೇರೆಗೆ ಸಭಾಧ್ಯಕ್ಷರು ಚರ್ಚೆ ನಡೆಸಿ ಮೇ ೨೫ರಿಂದ ತತ್‌ಕ್ಷಣದಿಂದ ಜಾರಿಗೆ ಬರುವಂತೆ ಅಮಾನತು ಆದೇಶವನ್ನು ಹಿಂಪಡೆದಿದ್ದಾರೆ. ಘಟನೋತ್ತರವಾಗಿ ಅಮಾನತು ಹಿಂಪಡೆಯುವ ನಿರ್ಣಯವನ್ನು ಸ್ಥಿರೀಕರಿಸುವಂತೆ ಮನವಿ ಮಾಡಿದರು. ಪ್ರಸ್ತಾಪವನ್ನು ಮತಕ್ಕೆ ಹಾಗಿ, ಧ್ವನಿಮತದ ಮೂಲಕ ಘಟನೋತ್ತರ ಅನುಮೋದನೆ ದೊರೆತಿದೆ ಎಂದು ಸಭಾಧ್ಯಕ್ಷ ಯು.ಟಿ.ಖಾದರ್ ಘೋಷಿಸಿದರು. ಮಧ್ಯಾಹ್ನ ಕಲಾಪ ಆರಂಭವಾದ ಬಳಿಕ ವಿರೋಧ ಪಕ್ಷದ ನಾಯಕ ಆರ್.ಅಶೋಕ, ಸಚಿವ ರಾಜಣ್ಣ ಅವರನ್ನು ಅಮಾನತುಗೊಳಿಸಲಾಗಿದೆ, ರಾಜೀನಾಮೆ ನೀಡಿದ್ದಾರೆ ಎಂಬೆಲ್ಲಾ ವದಂತಿಯಿದೆ. ಈ ಕುರಿತು ಸದನಕ್ಕೆ ಸತ್ಯ ತಿಳಿದುಕೊಳ್ಳುವ ಹಕ್ಕಿದೆ ಎಂದು ತಿಳಿಸಿದರು.

><><><><><><><

ವಿಧಾನಪರಿಷತ್‌ನಲ್ಲಿಂದು ಬಿಜೆಪಿಯ ಎನ್ ರವಿಕುಮಾರ್ ಶಾಲಾ ಮಕ್ಕಳಿಗೆ ಮೊಟ್ಟೆ ಹಾಗೂ ಬಾಳೆಹಣ್ಣು ನೀಡುವ ವಿಚಾರದಲ್ಲಿ ಆಗುತ್ತಿರುವ ಲೋಪದೋಷಗಳ ಬಗ್ಗೆ ಸರ್ಕಾರದ ಗಮನ ಸೆಳೆದರು. ಅಜೀಂ ಪ್ರೇಮ್ ಜೀ ಫೌಂಡೇಶನ್ ವತಿಯಿಂದ ಶಾಲಾ ಶಿಕ್ಷಣದ ಸೌಲಭ್ಯಗಳಿಗಾಗಿ ಒಂದು ಸಾವಿರದ ಐದುನೂರು ಕೋಟಿ ಅನುದಾನ ನೀಡಲಾಗಿದ್ದು, ಈ ಅನುದಾನದಲ್ಲಿ ಮಕ್ಕಳಿಗೆ ಮೊಟ್ಟೆ, ಬಾಳೆಹಣ್ಣು ಮತ್ತಿತರ ಪೌಷ್ಟಿಕಾಂಶಯುಕ್ತ ಆಹಾರ ನೀಡಲು ಸೂಚಿಸಲಾಗಿದೆ. ಆದರೆ ಐದುನೂರಕ್ಕೂ ಹೆಚ್ಚು ಶಾಲೆಗಳಲ್ಲಿ ಮೊಟ್ಟೆಯನ್ನು ಸಮರ್ಪಕವಾಗಿ ವಿತರಿಸದೇ ಅನುದಾನದ ದುರ್ಬಳಕೆ ಆಗಿದೆ ಎಂದು ಆರೋಪಿಸಿದರು. ಆರೋಪತಳ್ಳಿಹಾಕಿದ ಸಚಿವ ಮಧು ಬಂಗಾರಪ್ಪ, ಮೊಟ್ಟೆ ಬಾಳೆಹಣ್ಣು ನೀಡುವ ಜವಾಬ್ದಾರಿಯನ್ನು ಶಾಲಾ ಮೇಲುಸ್ತುವಾರಿ ಸಮಿತಿಗಳಿಗೆ ನೀಡಲಾಗಿದೆ. ದುರ್ಬಳಕೆಗೆ ಅವಕಾಶ ಇರುವುದಿಲ್ಲ ಎಂದರು. ಒಳಮೀಸಲಾತಿ ಸಂಬಂಧ ರಾಜ್ಯಸರ್ಕಾರ ಸ್ಪಷ್ಟವಾದ ತೀರ್ಮಾನ ತೆಗೆದುಕೊಂಡ ಮೇಲೆ ವೈದ್ಯಕೀಯ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗುವುದು ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಮೇಲ್ಮನೆಯಲ್ಲಿ ಆಶ್ವಾಸನೆ ನೀಡಿದ್ದಾರೆ.

><><><><><><><

ವಿಧಾನಮಂಡಲದ ಉಭಯ ಸದನಗಳ ಹೆಚ್ಚಿನ ಸುದ್ದಿಗಾಗಿ ಇಂದು ರಾತ್ರಿ ೭ ಗಂಟೆ ೪೫ ನಿಮಿಷಕ್ಕೆ ಪ್ರಸಾರವಾಗುವ ವಿಧಾನಮಂಡಲದಲ್ಲಿ ಇಂದು ಕಾರ್ಯಕ್ರಮವನ್ನು ಆಲಿಸಬಹುದು.

><><><><><><><

ಸಾಧನೆಗೆ ಅಂಗವೈಕಲ್ಯ ಅಡ್ಡಿಯಾಗದು ಎಂಬುದಕ್ಕೆ ಜಿಲ್ಲೆಯ ಹುನಗುಂದ ತಾಲೂಕಿನ ಕಮತಗಿ ಪಟ್ಟಣದ ನಿವಾಸಿ ವಿಕಲಚೇತನ ಲಕ್ಷ್ಮಣ ಕಕ್ಕನ್ನವರ ಸಾಕ್ಷಿಯಾಗಿದ್ದು, ಬೆಂಗಳೂರಿನ ಕಬ್ಬನ್ ಪಾರ್ಕ ನೌಕರರ ಭವನದಲ್ಲಿ ನಡೆದ ಕೈಮಗ್ಗ ನೇಕಾರ ಪ್ರಶಸ್ತಿ ಸಮಾರಂಭದಲ್ಲಿ ರಾಜ್ಯ ಪ್ರಶಸ್ತಿ ಪಡೆಯುವ ಮೂಲಕ ಸವಾಲಿನ ಜೀವನಕ್ಕೆ ಅರ್ಥ ತಂದುಕೊಂಡಿದ್ದಾರೆ. ಕಮತಗಿ ಪಟ್ಟಣದ ನೇಕಾರಿಕೆ ಕುಟುಂಬದಲ್ಲಿ ಜನಿಸಿದ ಲಕ್ಷ್ಮಣ ಸಿದ್ದಪ್ಪ ಕಕ್ಕನ್ನವರ ರಾಜ್ಯ ಸರ್ಕಾರ ಕಳೆದ ಕೈಮಗ್ಗ ದಿನಾಚರಣೆ ಯಂದು ಉತ್ತಮ ನೇಕಾರಿಕೆಗೆ ಕೊಡಮಾಡುವ ರಾಜ್ಯ ಪ್ರಶಸ್ತಿಯನ್ನು ಪಡೆದು ಇತರರಿಗೆ ಮಾದರಿಯಾಗಿದ್ದಾರೆ. ರಾಜ್ಯ ಪ್ರಶಸ್ತಿ ಪುರಸ್ಕೃತ ವಿಕಲಚೇತನ ನೇಕಾರ ಲಕ್ಷ್ಮಣ ಸಿದ್ದಪ್ಪ ಕಕ್ಕನ್ನವರ, ಪೋಲೀಯೋ ಪೀಡಿತನಾಗಿದ್ದರು ಛಲಬಿಡದೆ ನೇಕಾರಿಗೆ ಮಾಡುತ್ತಿದ್ದಾರೆ. ಅವರ ಪತ್ನಿ ಕೂಡ ವಿಕಲಚೇತನರಾಗಿದ್ದು, ಅವರ ಕೆಲಸದಲ್ಲಿ ಸಹಭಾಗಿಯಾಗಿದ್ದಾರೆ. ಅವರು ನನಗೆ ಸೀರೆ ನೇಯ್ಗೆಗೆ ಮಾಡಿದ್ದಕ್ಕೆ ರಾಜ್ಯ ಪ್ರಶಸ್ತಿ ಬಂದಿದ್ದು ಬಹಳ ಖುಷಿಯಾಗಿದೆ ಎಂದು ಆಕಾಶವಾಣಿಯೊಂದಿಗೆ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

**ಧ್ವನಿ - ಪ್ರಶಸ್ತಿ ಪುರಸ್ಕೃತ ವಿಕಲಚೇತನ ಲಕ್ಷ್ಮಣ ಕಕ್ಕನ್ನವರ**

><><><><><><><

ರಾಜ್ಯದ ಕರಾವಳಿಯಲ್ಲಿಂದು ವ್ಯಾಪಕಮಳೆಯಾಗಿದೆ. ವಾಯುಭಾರ ಕುಸಿತದ ಹಿನ್ನೆಲೆಯಲ್ಲಿ ಕರಾವಳಿ ಹಾಗೂ ಉತ್ತರ ಒಳನಾಡಿನ ಜಿಲ್ಲೆಗಳಲ್ಲಿ ಇಂದಿನಿಂದ ಇದೇ ೧೭ ರವರೆಗೆ ವ್ಯಾಪಕ ಮಳೆಯಾಗಲಿದೆ. ಬೆಂಗಳೂರಿನ ಕೆಲವೆಡೆ ಇಂದಿನಿಂದ ಇದೇ ೧೭ರವರೆಗೆ ಕೆಲವೆಡೆ ಹಗುರದಿಂದ ಸಾಧಾರಣ ಮಳೆಯಾಗುವ ನಿರೀಕ್ಷೆ ಇದೆ. ಉಳಿದಂತೆ ಕರಾವಳಿ, ಕೊಡಗು, ಉತ್ತರ ಕನ್ನಡ, ಹಾಸನ, ಬೀದರ್, ಕಲ್ಬುರ್ಗಿ, ಹಾವೇರಿ, ವಿಜಯಪುರ, ಕೊಪ್ಪಳ ಜಿಲ್ಲೆಗಳಲ್ಲಿ ಭಾರೀ ಮಳೆಯಾಗಲಿದ್ದು, ಹಳದಿ ಅಲರ್ಟ್ ಘೋಷಿಸಲಾಗಿದೆ ಎಂದು ಹವಾಮಾನ ಇಲಾಖೆ ನಿರ್ದೇಶಕ ಡಾ.ಸಿ.ಎಸ್.ಪಾಟೀಲ್ ಮಾಹಿತಿ ನೀಡಿದ್ದಾರೆ.

**ಧ್ವನಿ - ಡಾ.ಸಿ.ಎಸ್.ಪಾಟೀಲ್, ಹವಾಮಾನ ಇಲಾಖೆ ನಿರ್ದೇಶಕ**

><><><><><><><

ರಾಜ್ಯದ ವಿವಿಧೆಡೆ ಇಂದು ಶ್ರೀ ರಾಘವೇಂದ್ರಸ್ವಾಮಿಗಳ ೩೫೪ನೇ ಆರಾಧನಾ ಮಹೋತ್ಸವವನ್ನು ಶ್ರದ್ಧಾಭಕ್ತಿಗಳಿಂದ ಆಚರಿಸಲಾಗುತ್ತಿದೆ. ದೊಡ್ಡಬಳ್ಳಾಪುರದ ಶ್ರೀ ರಾಘವೇಂದ್ರ ಸ್ವಾಮಿ ಮಠದಲ್ಲಿ ಆರಾಧನಾ

ಮಹೋತ್ಸವದ ಅಂಗವಾಗಿ ರಾಯರ ಬೃಂದಾನವನಕ್ಕೆ ವಿಶೇಷ ಅಲಂಕಾರ, ವಿಶೇಷ ಪೂಜಾ, ಹೋಮಗಳನ್ನು ಹಮ್ಮಿಕೊಳ್ಳಲಾಗಿತ್ತು. ಆರಾಧನೆಯ ಅಂಗವಾಗಿ, ಸಂಗೀತ ಕಚೇರಿ ನಡೆಯಿತು. ವಿಜಯನಗರ ಹೊಸಪೇಟೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿಂದು ರಾಘವೇಂದ್ರ ಸ್ವಾಮಿಗಳ ಮಧ್ಯಾರಾಧನೆ ಪ್ರಯುಕ್ತ ೧೦೮ ಕ್ಷೀರಾಭಿಷೇಕ, ಅಷ್ಠೋತ್ತರ ಬೇದಪಾರಾಯಣ ಕನಕ ಮಹಾಪೂಜೆ ಅರ್ಚನೆ ನೈವೇದ್ಯ ಮುಂತಾದ ಪೂಜಾ ಕೈಗಳು ವಿಜೃಂಭಣೆಯಿಂದ ಜರುಗಿದವು. ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಆಗಮಿಸಿ, ದರ್ಶನ ಪಡೆದರು.

><><><><><><><

ಮಂಗಳೂರು ಉತ್ತರ, ಮಂಗಳೂರು ಪೂರ್ವ, ಮುಲ್ಕಿ ಹಾಗೂ ಮಲ್ಪೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕಾರ್ಯಾಚರಣೆ ನಡೆಸಿದ ಮಂಗಳೂರು ಪೊಲೀಸರು ವಿದ್ಯಾರ್ಥಿಗಳಿಗೆ ಹಾಗೂ ಯುವಕರಿಗೆ ಡ್ರಗ್ ಮಾರಾಟ ಮಾಡುತ್ತಿದ್ದ ೭ ಜನರನ್ನು ಬಂಧಿಸಿ, ಒಂದು ಕಿಲೋಗೂ ಅಧಿಕ ಮಾದಕ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ. ಬಂಧಿತರವನ್ನು ನ್ಯಾಯಾಂಗ ಬಂಧನಕ್ಕೆ ನೀಡಲಾಗಿದೆ ಎಂದು ಮಂಗಳೂರು ನಗರ ಪೊಲೀಸ್ ಆಯುಕ್ತ ಸುಧೀರ್ ಕುಮಾರ್ ರೆಡ್ಡಿ ತಿಳಿಸಿದ್ದಾರೆ.

><><><><><><><

ಆಗಸ್ಟ ೧೫ ರಂದು ಜರುಗುವ ಸ್ವಾತಂತ್ರ್ಯೋತ್ಸವ ದಿನಾಚರಣೆ ಅಚ್ಚುಕಟ್ಟಾಗಿ ಶಿಸ್ತಿನಿಂದ ಜರುಗಲು ಸಂಬಂಧಿತ ಇಲಾಖಾಧಿಕಾರಿಗಳು ಪೂರ್ವತಯಾರಿ ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ. ಎಂ. ಆರ್. ರವಿ ತಿಳಿಸಿದರು. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸ್ವಾತಂತ್ರ್ಯ ದಿನಾಚರಣೆ ಕುರಿತು ಜರುಗಿದ ಅಂತಿಮ ಸಿದ್ಧತೆಗಳ ಕುರಿತ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಸಂಬಂಧಿತ ಅಧಿಕಾರಿಗಳಿಗೆ ಕಾರ್ಯಕ್ರಮದ ಯಶಸ್ವಿನ ಕುರಿತಂತೆ ಸೂಕ್ತ ನಿರ್ದೇಶನಗಳನ್ನು ನೀಡಿದರು.

><><><><><><><

ಸಮಾಜದ, ಅವಕಾಶ ವಂಚಿತ ಹಾಗೂ ದುರ್ಬಲ ವರ್ಗಗಳಿಗೆ ಉಚಿತ ಮತ್ತು ಸಮರ್ಥ ಕಾನೂನು ಸೇವೆಗಳು ಒದಗಿಸುವುದು ಖಾಯಂ ಜನತಾ ನ್ಯಾಯಾಲಯದ ಮುಖ್ಯ ಉದ್ದೇಶವಾಗಿದೆ ಎಂದು ಬೆಳಗಾವಿ ಜನತಾ ನ್ಯಾಯಾಲಯದ ಅಧ್ಯಕ್ಷ ಹಾಗೂ ಜಿಲ್ಲಾ ಸತ್ರ ನ್ಯಾಯಾಧೀಶ ಪಲ್ಲೇದ ರವೀಂದ್ರ ಜಡಿಯಪ್ಪ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಸುದ್ದಿಗಾರರಿಗೆ ಮಾಹಿತಿ ನೀಡಿದ ಅವರು, ಬೆಳಗಾವಿ ಖಾಯಂ ಜನತಾ ನ್ಯಾಯಾಲಯ ಸಾರ್ವಜನಿಕ ಉಪಯುಕ್ತ ಸೇವೆಗಳ ಅಡಿಯಲ್ಲಿ ಉಭಯ ಕ್ಷಕಿಗಾರರ ಮಧ್ಯ ಸಂಧಾನ ಹಾಗೂ ಸಹಮತದೊಂದಿಗೆ ಪ್ರಕರಗಳ ವಿಲೇವಾರಿ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿದೆ ಎಂದು ತಿಳಿಸಿದ್ದಾರೆ.

><><><><><><><